ಕರ್ನಾಟಕ ಸರ್ಕಾರ

ಖಜಾನೆ ಇಲಾಖೆ

ಖಜಾನೆ ಆಯುಕ್ತರ ಕಾರ್ಯಾಲಯ, ಕೆ.ಪಿ.ಸಿ.ಎಲ್ ಹಸಿರು ಕಟ್ಟಡ, 5 & 6ನೇ ಮಹಡಿ, ಅರಮನೆ ರಸ್ತೆ, ಬೆಂಗಳೂರು-560 001.

ಸಂ.ಖನಿ/ಪ್ರಕ್ರಿಯೆ/06/2023-24 ದಿನಾಂಕ: 03.06.2024.

ರಾಜ್ಯದ ಎಲ್ಲಾ ಖಜಾನೆಗಳ ಪ್ರಭಾರಾಧಿಕಾರಿಗಳಿಗೆ,

ಮಾನ್ಯರೆ,

**ವಿಷಯ:** ಕರ್ನಾಟಕ ರಾಜ್ಯ ಸರ್ಕಾರದ ಸಾಮಾನ್ಯ ಭವಿಷ್ಯ ನಿಧಿ ಚಂದಾದಾರರ ಪ್ರಕರಣಗಳಲ್ಲಿ 2023-24 ನೇ ಆರ್ಥಿಕ ವರ್ಷದಲ್ಲಿ ರೂ.5.00 ಲಕ್ಷಗಳಿಗೂ ಮೀರಿ ಜಿಪಿಎಫ್ ವಂತಿಗೆ ಕಟಾವಣೆಯಾಗಿರುವ ಮೊತ್ತಕ್ಕೆ ಬಡ್ಡಿಯನ್ನು ಪಾವತಿಸುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಆದೇಶ ಸಂಖ್ಯೆ: ಆಇ 08 ಮುಭನಿ 2023 ದಿನಾಂಕ:27.05.2024.

*********

ಉಲ್ಲೇಖಿತ ಸರ್ಕಾರದ ಆದೇಶದಲ್ಲಿ, 2023-24 ನೇ ಸಾಲಿಗೆ ಅನ್ವಯಿಸುವಂತೆ ಕರ್ನಾಟಕ ರಾಜ್ಯದ ಜಿಪಿಎಫ್ ಚಂದಾದಾರರ ಖಾತೆಗಳಿಗೆ ರೂ. 5.00 ಲಕ್ಷಗಳಿಗೆ ಮೀರಿ ಜಮಾವಣೆ ಮಾಡಿರುವ ಮೊತ್ತಕ್ಕೆ ಆದಾಯ ತೆರಿಗೆಯ ಅನ್ವಯಿಕೆಗೊಳಪಟ್ಟು ಬಡ್ಡಿಯನ್ನು ಪಾವತಿಸಲು ಸರ್ಕಾರದ ಮಂಜೂರಾತಿಯನ್ನು ನೀಡಲಾಗಿರುತ್ತದೆ.(ಪ್ರತಿ ಲಗತ್ತಿಸಿದೆ) ಅದರಂತೆ ಖಜಾನೆಗಳಲ್ಲಿ ಕ್ರಮ ಕೈಗೊಳ್ಳಲು ಸೂಚಿಸಿದೆ.

| ಕ್ರ.ಸಂ | ಸರ್ಕಾರದ ಸುತ್ತೋಲೆ ಸಂಖ್ಯೆ | ವಿಷಯ |
|---|---|---|
| 1. | ಆಇ 08 ಮುಭನಿ 2023 ದಿನಾಂಕ:27.05.2024. | ಕರ್ನಾಟಕ ರಾಜ್ಯ ಸರ್ಕಾರದ ಸಾಮಾನ್ಯ ಭವಿಷ್ಯ ನಿಧಿ ಚಂದಾದಾರರ ಪ್ರಕರಣಗಳಲ್ಲಿ 2023-24 ನೇ ಆರ್ಥಿಕ ವರ್ಷದಲ್ಲಿ ರೂ.5.00 ಲಕ್ಷಗಳಿಗೂ ಮೀರಿ ಜಿಪಿಎಫ್ ವಂತಿಗೆ ಕಟಾವಣೆಯಾಗಿರುವ ಮೊತ್ತಕ್ಕೆ ಬಡ್ಡಿಯನ್ನು ಪಾವತಿಸುವ ಬಗ್ಗೆ. |

ತಮ್ಮ ವಿಶ್ವಾಸಿ,

ಖಜಾನೆ ಆಯುಕ್ತರ ಪರವಾಗಿ,

ಬೆಂಗಳೂರು.

ಪ್ರತಿಯನ್ನು:

ಸಹಾಯಕ ನಿರ್ದೇಶಕರು, ಪಿ.ಎಂ.ಯು ಘಟಕ, ಖಜಾನೆ ಆಯುಕ್ತಾಲಯ, ಬೆಂಗಳೂರು ಇವರಿಗೆ ಖಜಾನೆ ನೆಟ್‌ನಲ್ಲಿ ಪ್ರಕಟಿಸಲು ಸೂಚಿಸಿದೆ.

CamScanner

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕರ್ನಾಟಕ ರಾಜ್ಯ ಸರ್ಕಾರದ ಸಾಮಾನ್ಯ ಭವಿಷ್ಯ ನಿಧಿ ಚಂದಾದಾರರ ಪ್ರಕರಣಗಳಲ್ಲಿ 2023–24ನೇ ಆರ್ಥಿಕ ವರ್ಷದಲ್ಲಿ ರೂ.5.00 ಲಕ್ಷಗಳಿಗೂ ಮೀರಿ ಜಿಪಿಎಫ್ ವಂತಿಗೆ ಕಟಾವಣೆಯಾಗಿರುವ ಮೊತ್ತಕ್ಕೆ ಬಡ್ಡಿಯನ್ನು ಪಾವತಿಸುವ ಬಗ್ಗೆ.

ಕ್ರ.ಸಂ. 1850
31 JUN 2024

**ಓದಲಾಗಿದೆ:**
1. ಕೇಂದ್ರ ಮಂತ್ರಾಲಯದ ಕಛೇರಿ ಜ್ಞಾಪನ ಸಂಖ್ಯೆ:3/06/2021–P&PW(F), ದಿನಾಂಕ:02/05/2024.
2. ಸರ್ಕಾರದ ಆದೇಶ ಸಂಖ್ಯೆ: ಆಇ 16 ಮುಭನಿ 2023, ದಿನಾಂಕ:17/06/2023,
3. ಪ್ರಧಾನ ಮಹಾಲೇಖಪಾಲರ ಕಛೇರಿಯ ಪತ್ರ ಸಂಖ್ಯೆ: FM (C)/G-III/2024-25/4, ದಿನಾಂಕ:15/05/2024.

**//**//**

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ:(1)ರ ಕೇಂದ್ರ ಮಂತ್ರಾಲಯದ ಕಛೇರಿ ಜ್ಞಾಪನದಲ್ಲಿ 2022–23ನೇ ಸಾಲಿನಲ್ಲಿ ಕೇಂದ್ರ ಸರ್ಕಾರಿ ನೌಕರರ ಜಿ.ಪಿ.ಎಫ್. ಖಾತೆಗಳಿಗೆ ವಾರ್ಷಿಕ ರೂ.5.00 ಲಕ್ಷಕ್ಕೂ ಮೀರಿ ಪಾವತಿಸಲಾದ ಪ್ರಕರಣಗಳಲ್ಲಿ ರೂ.5.00 ಲಕ್ಷ ಮೀರಿದ ಹೆಚ್ಚುವರಿ ಮೊತ್ತಕ್ಕೂ ಆದಾಯ ತೆರಿಗೆಯ ಅನ್ವಯಿಕೆಗೊಳಪಟ್ಟು ಬಡ್ಡಿಯನ್ನು ಪಾವತಿಸುವಂತೆ ಸ್ಪಷ್ಟೀಕರಣವನ್ನು ನೀಡಿ ಅದರಂತೆ ಅನುಷ್ಠಾನಗೊಳಿಸಲು ಸೂಚಿಸಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ:(2)ರ ದಿ:17/06/2023ರ ಸರ್ಕಾರದ ಆದೇಶದಲ್ಲಿ ಕರ್ನಾಟಕ ರಾಜ್ಯ ಸರ್ಕಾರದ ಭವಿಷ್ಯ ನಿಧಿ ಚಂದಾದಾರರ ಖಾತೆಗೆ ಚಂದಾದಾರರು ಒಂದು ಆರ್ಥಿಕ ವರ್ಷದಲ್ಲಿ ಪಾವತಿಸಬಹುದಾದ ಗರಿಷ್ಠ ಮೊತ್ತವನ್ನು ರೂ. 5.00 ಲಕ್ಷಗಳಿಗೆ ಮಿತಿಗೊಳಿಸಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ:(3)ರ ಪತ್ರದಲ್ಲಿ ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು ಇವರು ಕೇಂದ್ರ ಸರ್ಕಾರದ ದಿನಾಂಕ: 02.05.2024ರ Office Memorandum ಅನ್ನು ಲಗತ್ತಿಸಿ ಅದರಂತೆ ಕರ್ನಾಟಕ ಸಾಮಾನ್ಯ ಭವಿಷ್ಯ ನಿಧಿ ಚಂದಾದಾರರ ಪ್ರಕರಣಗಳಲ್ಲಿಯೂ ಕ್ರಮ ಕೈಗೊಳ್ಳಲು ಕೋರಿರುತ್ತಾರೆ.

ಅದರಂತೆ ಪರಿಶೀಲಿಸಿದ ಸರ್ಕಾರವು ಈ ಕೆಳಗಿನಂತೆ ಆದೇಶಿಸಲಾಗಿದೆ.

**ಸರ್ಕಾರದ ಆದೇಶ: ಆಇ 08 ಮುಭನಿ 2023,**

**ಬೆಂಗಳೂರು, ದಿನಾಂಕ: 27.05.2024.**

2023–24ನೇ ಸಾಲಿಗೆ ಅನ್ವಯಿಸುವಂತೆ ಕರ್ನಾಟಕ ರಾಜ್ಯದ ಜಿ.ಪಿ.ಎಫ್. ಚಂದಾದಾರರ ಖಾತೆಗಳಿಗೆ

…2

CamScanner

ರೂ.5.00 ಲಕ್ಷಗಳಿಗೆ ಮೀರಿ ಜಮಾವಣೆ ಮಾಡಿರುವ ಮೊತ್ತಕ್ಕೆ ಆದಾಯ ತೆರಿಗೆಯ ಅನ್ವಯಿಕೆಗೊಳಪಟ್ಟು ಬಡ್ಡಿಯನ್ನು ಪಾವತಿಸಲು ಸರ್ಕಾರದ ಮಂಜೂರಾತಿಯನ್ನು ನೀಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ನೇತ್ರಪ್ರಭಾ ಎಂ. ಧಾಯಪುಲೆ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರ್ಥಿಕ ಇಲಾಖೆ(ಆಡಳಿತ ಮತ್ತು ಮುಂಗಡಗಳು)

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (ಎ ಮತ್ತು ಇ) ಕರ್ನಾಟಕ, ಪಿ.ಒ.ಬಾಕ್ಸ್ ನಂ.5329/5369, ಪಾರ್ಕ್ ಹೌಸ್ ರೋಡ್, ಬೆಂಗಳೂರು – 560 001.
2. ಪ್ರಧಾನ ಮಹಾಲೇಖಪಾಲರು (ಜನರಲ್ & ಸೋಷಿಯಲ್ ಸೆಕ್ಟರ್ ಆಡಿಟ್), ಕರ್ನಾಟಕ, ನ್ಯೂ ಬಿಲ್ಡಿಂಗ್, ಆಡಿಟ್ ಭವನ, ಪಿ.ಬಿ.ನಂ.5398, ಬೆಂಗಳೂರು – 560 001.
3. ಪ್ರಧಾನ ಮಹಾಲೇಖಪಾಲರು (ಎಕನಾಮಿಕ್ & ರೆವೆನ್ಯೂ ಸೆಕ್ಟರ್ ಆಡಿಟ್), ಕರ್ನಾಟಕ, ನ್ಯೂ ಬಿಲ್ಡಿಂಗ್, ಆಡಿಟ್ ಭವನ, ಪಿ.ಬಿ.ನಂ.5398, ಬೆಂಗಳೂರು – 560 001.
4. ಆಯುಕ್ತರು, ಖಜಾನೆ ಆಯುಕ್ತಾಲಯ, 6ನೇ ಮಹಡಿ, ಕೆಪಿಸಿಎಲ್ ಗ್ರೀನ್ ಬಿಲ್ಡಿಂಗ್, ಔಷಧ ನಿಯಂತ್ರಣ ಕಟ್ಟಡದ ಆವರಣ, ಅರಮನೆ ರಸ್ತೆ, ಬೆಂಗಳೂರು.
5. ಸರ್ಕಾರದ ಕಾರ್ಯದರ್ಶಿ, ಖಜಾನೆ-2, 6ನೇ ಮಹಡಿ, ಕೆಪಿಸಿಎಲ್ ಗ್ರೀನ್ ಬಿಲ್ಡಿಂಗ್, ಔಷಧ ನಿಯಂತ್ರಣ ಕಟ್ಟಡದ ಆವರಣ, ಅರಮನೆ ರಸ್ತೆ, ಬೆಂಗಳೂರು.
6. ಖಜಾನೆ ಇಲಾಖೆ, ಕೆ.ಪಿ.ಸಿ.ಎಲ್. ಗ್ರೀನ್ ಬಿಲ್ಡಿಂಗ್, ಔಷಧ ನಿಯಂತ್ರಣ ಕಟ್ಟಡದ ಆವರಣ, ಅರಮನೆ ರಸ್ತೆ, ಬೆಂಗಳೂರು-01.
7. ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
9. ಸರ್ಕಾರದ ಕಾರ್ಯದರ್ಶಿ (ಆಯವ್ಯಯ ಮತ್ತು ಸಂಪನ್ಮೂಲ) ರವರ ಆಪ್ತ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
10. ಸರ್ಕಾರದ ಉಪ ಕಾರ್ಯದರ್ಶಿ (ಆಡಳಿತ ಮತ್ತು ಸಮನ್ವಯ) ರವರ ಆಪ್ತ ಸಹಾಯಕರು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
11. ಕಛೇರಿ ಪ್ರತಿ/ ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.

CamScanner